ನ್ಯಾಯಬೆಲೆ ಅಂಗಡಿಗಳ ಮೂಲಕ ಅಗತ್ಯ ವಸ್ತುಗಳನ್ನು ವಿತರಣೆ ಮಾಡುವ ಬಗ್ಗೆ

2851 - ಶ್ರೀ ಸಾದತ್ ಅಲಿ ಖಾನ್ (ಚನ್ನಪಟ್ಟಣ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) *ರಾಜ್ಯದಲ್ಲಿರುವ ನ್ಯಾಯ ಬೆಲೆ ಅಂಗಡಿಗಳ ಮೂಲಕ ಅಗತ್ಯ ವಸ್ತುಗಳಾದ, ಸೋಪು, ಬಟ್ಟೆ, ಪುಸ್ತಕ, ಕಡಲೆಕಾಯಿ ಎಣ್ಣೆ ಇತ್ಯಾದಿಗಳನ್ನು ವಿತರಿಸುವ ಯೋಜನೆ ಸರ್ಕಾರಕ್ಕೆ ಇರುವುದೇ ?*

ಆ) *ಚನ್ನಪಟ್ಟಣದಲ್ಲಿ ಸಮರ್ಪಕ ವಿತರಣೆಗಾಗಿ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಸಗಟು ವಿತರಣಾ ಕೇಂದ್ರದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?*

ಇ) *ಹಾಗಿದ್ದಲ್ಲಿ, ಎಂದು ಇದನ್ನು ಮಂಜೂರು ಮಾಡಲಾಗುವುದು ?*

ಶ್ರೀ ಟಿ.ಎನ್. ನರಸಿಂಹಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ಪರಿಶೀಲನೆಯಲ್ಲಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಚೆನ್ನಪಟ್ಟಣ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಯೋಗಶಾಲೆ ಸರಕರಣೆಗಳು ಇಲ್ಲದಿರುವ ಬಗ್ಗೆ.

2849 - ಶ್ರೀ ಸಾದತ್ ಅಲಿ ಖಾನ್ (ಚನ್ನಪಟ್ಟಣ) : ಮಾನ್ಯ ಶಿಕ್ಷಣ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) *ಚೆನ್ನಪಟ್ಟಣ ಸರ್ಕಾರಿ ಹುಡುಗರ ಹಾಗೂ ಹೆಣ್ಣುಮಕ್ಕಳ ಪದವಿಪೂರ್ವ ಕಾಲೇಜುಗಳಲ್ಲಿ ಬಹಳ ಕಾಲದಿಂದ ಸರಿಯಾದ ಪ್ರಯೋಗ ಶಾಲಾ ಸಲಕರಣೆಗಳ ಇಲ್ಲದಿರುವುದು ನಿಜವೆ ?*

ಆ) *ಸದರಿ ಕಾಲೇಜುಗಳಿಗೆ ಸರ್ಕಾರದ ವತಿಯಿಂದ ಅವುಗಳನ್ನು ಒದಗಿಸಲು ಏನು ಕ್ರಮ ಕೈಗೊಳ್ಳಲಾಗಿದೆ ?*

ಇ) *ಇಲ್ಲದೆ ಇದ್ದ ಪಕ್ಷದಲ್ಲಿ ಯಾವಾಗ ಇದನ್ನು ಕಾರ್ಯಗತಗೊಳಿಸಲಾಗುವುದು ?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):

ಅ) ಇಲ್ಲ.

ಆ) ಕೊರತೆ ಏನಾದರೂ ಇದ್ದಲ್ಲಿ ಪ್ರಸ್ತಾವನೆ ಬಂದನಂತರ ಸರಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಇ) ಮೇಲೆ (ಆ)ದಲ್ಲಿ ಉತ್ತರಿಸಿದಂತೆ.